## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ ಗಿರಿಜಾಬಾಯಿ, ಅಧ್ಯಕ್ಷರು, ಅಣಬೂರು ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ ಇವರ ಪತ್ರ ಸಂಖ್ಯೆ: ಜಿಪಂದಾಆ(2):ಗ್ರಾಪಂ:ಸಿಆರ್:56/2018-19, ದಿನಾಂಕ:03-08-2018.
2. ಸರ್ಕಾರದ ಕಾರಣ ಕೇಳುವ ನೋಟೀಸು ಸಂಖ್ಯೆ: ಗ್ರಾಅಪ:811:ಗ್ರಾಪಂಅ:2018, ದಿನಾಂಕ: 17-09-2018.
3. ಶ್ರೀಮತಿ ಗಿರಿಜಾಬಾಯಿ, ಅಧ್ಯಕ್ಷರು, ಇವರು ಸರ್ಕಾರದ ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:11-10-2018.
4. ವಿಚಾರಣೆಗೆ ಹಾಜರಾಗುವ ತಿಳುವಳಿಕೆ ಪತ್ರ ಸಂಖ್ಯೆ: ಗ್ರಾಅಪ:811:ಗ್ರಾಪಂಅ:2018, ದಿನಾಂಕ: 19-01-2019.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ದಾವಣಗೆರೆ ಇವರು 2016-17ನೇ ಸಾಲಿನ 14ನೇ ಹಣಕಾಸು ಯೋಜನೆಯಲ್ಲಿ ಬಿಡುಗಡೆಯಾದ ಅನುದಾನವನ್ನು ಕಾಮಗಾರಿಗಳಿಗೆ ಖರ್ಚು ಮಾಡುವಾಗ ಗಾಂಧಿ ಸಾಕ್ಷಿ ತತ್ರಾಂಶದಲ್ಲಿ ಅಳವಡಿಸದೇ ಸಾಮಗ್ರಿ ಖರೀದಿ ಬಿಲ್ಲುಗಳಿಗೆ ಹಣ ಪಾವತಿಸಿ, ಸರ್ಕಾರದ ಮಾರ್ಗಸೂಚಿ ಉಲ್ಲಂಘಿಸಿ ರೂ.37,92,435/-ಗಳನ್ನು ಖರ್ಚು ಭರಿಸಿ ಕರ್ತವ್ಯಲೋಪವೆಸಗಲಾಗಿರುತ್ತದೆ. 2016-17ನೇ ಸಾಲಿನ 14ನೇ ಹಣಕಾಸು ಯೋಜನೆಯಲ್ಲಿ 14 ಕಾಮಗಾರಿಗಳಿಗೆ ಕ್ರಿಯಾ ಯೋಜನೆಯನ್ನು ರೂ.10,97,474/-ಗಳಿಗೆ ಅನುಮೋದನೆಯನ್ನು ಪಡೆದಿದ್ದು, ಸದರಿ ಕಾಮಗಾರಿಗಳನ್ನು ನಿರ್ವಹಿಸದೇ 14ನೇ ಹಣಕಾಸು ಯೋಜನೆಯ ಮಾರ್ಗಸೂಚಿಯನ್ನು ಉಲ್ಲಂಘಿಸಿ, ಕುಡಿಯುವ ನೀರಿನ ಸಾಮಾಗ್ರಿಗಳ ಖರೀದಿ, ಪೈಪ್‌ಲೈನ್ ದುರಸ್ತಿ, ಬೀದಿ ದೀಪಗಳ ನಿರ್ವಹಣೆ, ಮೋಟರ್‌ಗಳ ದುರಸ್ತಿ ಮತ್ತು ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದಂತೆ ಹಳ್ಳಿಗಳ ಚರಂಡಿ ಸ್ವಚ್ಛತೆಗೆ ವೆಚ್ಚ ಭರಿಸಿ ಯೋಜನೆಯ ಮಾರ್ಗಸೂಚಿ ಉಲ್ಲಂಘಿಸಿ ಕರ್ತವ್ಯಲೋಪವೆಸಗಲಾಗಿರುತ್ತದೆ.

ಈ ಮೇಲಿನ ಎಲ್ಲಾ ಅಂಶಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ಗಿರಿಜಾಬಾಯಿ, ಅಧ್ಯಕ್ಷರು, ಅಣಬೂರು ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಪರೋಕ್ಷವಾಗಿ ಸರ್ಕಾರದ ಹಣ ದುರುಪಯೋಗಕ್ಕೆ ಕಾರಣರಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ನೋಟೀಸಿನಲ್ಲಿ ಶ್ರೀಮತಿ ಗಿರಿಜಾಬಾಯಿ, ಅಧ್ಯಕ್ಷರು ಇವರಿಗೆ ಕಾರಣ ಕೇಳುವ ನೋಟೀಸು ಜಾರಿ ಮಾಡಿ ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಅವರ ಸಮಜಾಯಿಷಿ ಕೇಳಲಾಗಿತ್ತು.

ಈ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಶ್ರೀಮತಿ ಗಿರಿಜಾಬಾಯಿ, ಅಧ್ಯಕ್ಷರು ಸಲ್ಲಿಸಿರುವ ಉತ್ತರದಲ್ಲಿ "ನಾನು ಸುಮಾರು ಎರಡು ವರ್ಷಗಳಿಂದ ಜಗಳೂರು ತಾಲ್ಲೂಕು ಅಣಬೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಉತ್ತಮ ಹೆಸರನ್ನು ಪಡೆದಿರುತ್ತೇನೆ. ಕೆಲವು ರಾಜಕೀಯ ಪಟ್ಟಭದ್ರ ವ್ಯಕ್ತಿಗಳು ನನ್ನ ರಾಜಕೀಯ ಬೆಳವಣಿಗೆಯನ್ನು ಸಹಿಸದೇ ನನ್ನ ವಿರುದ್ಧ ಸುಳ್ಳು ಆರೋಪಗಳನ್ನು ಈ ಹಿಂದೆ ಹೊರಿಸಿ ಮೇಲಾಧಿಕಾರಿಗಳಿಗೆ ಆಧಾರಹಿತ ಲಿಖಿತ ದೂರುಗಳನ್ನು ನೀಡಿರುತ್ತಾರೆ. ಸದರಿ ದೂರುಗಳ ವಿಚಾರಣೆ ಕೈಗೊಂಡು ರಾಜಕೀಯ ಪ್ರೇರಿತ ಎಂದು ಮನಗಂಡ ಅಧಿಕಾರಿಗಳು ಸದರಿ ಅರ್ಜಿಗಳ ವಿಚಾರಣೆ ಮುಕ್ತಗೊಳಿಸಿರುತ್ತಾರೆ.

ನಾನು 14ನೇ ಹಣಕಾಸು ಯೋಜನೆಯ ಅಡಿಯಲ್ಲಿ ಸರ್ಕಾರದ ಹಣವನ್ನು ದುರುಪಯೋಗ ಪಡಿಸಿಕೊಂಡಿರುವುದಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆ ಇವರ ಪತ್ರ ಸಂಖ್ಯೆ:ಸಿಆರ್56/2018-19, ದಿನಾಂಕ:03-08-2018ರ ವರದಿಯಲ್ಲಿ ಹೇಳಿರುವ ಅಂಶಗಳು ರಾಜಕೀಯ ಪಟ್ಟಭದ್ರ ವ್ಯಕ್ತಿಗಳ ಒತ್ತಡಕ್ಕೆ ಮಣಿದು ಸೃಷ್ಟಿಸಿದಂತಹ ಕಾರಣಗಳಾಗಿರುತ್ತವೆ. ನಾನು ಸದರಿ 14ನೇ ಹಣಕಾಸು ಯೋಜನೆಯ ಅಡಿಯಲ್ಲಿ 14 ಕಾಮಗಾರಿಗಳಿಗೆ ಕ್ರಿಯಾಯೋಜನೆಯನ್ನು ಪಡೆದ ನಂತರ ಸದರಿ ಕಾಮಗಾರಿಗಳ ಕಾರ್ಯಗಳು ಮುಗಿದ ನಂತರ ಸಂಬಂಧಪಟ್ಟ ಅಧಿಕಾರಿಗಳ ವರದಿ ಆಧಾರದ ಮೇಲೆ ಮತ್ತು ಕಾಮಗಾರಿಗಳ ಸ್ಥಳ ಪರಿಶೀಲನೆ ನಂತರ ಅನುಮೋದನೆ ನೀಡಿರುತ್ತೇನೆ.

ಈ ಮೇಲ್ಕಂಡ ಎಲ್ಲಾ ಅಂಶಗಳಿಂದ ನಾನು 14ನೇ ಹಣಕಾಸು ಯೋಜನೆಯ ಅಡಿಯಲ್ಲಿ ಸರ್ಕಾರದ ಯಾವುದೇ ಹಣವನ್ನು ದುರುಪಯೋಗಪಡಿಸಿಕೊಂಡಿರುವುದಿಲ್ಲ ಆದುದರಿಂದ ತಾವುಗಳು ದಯಮಾಡಿ ನನ್ನ ವಿರುದ್ಧ ಮಾಡಲಾದ ಆರೋಪಗಳನ್ನು ಕೈಬಿಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ (4)ರಲ್ಲಿ ಶ್ರೀಮತಿ ಗಿರಿಜಾಬಾಯಿ, ಅಧ್ಯಕ್ಷರು ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿನಾಂಕ:29-01-2019 ರಂದು ಜರುಗಿದ ವಿಚಾರಣೆಯಲ್ಲಿ ಜಿಲ್ಲಾ ಪಂಚಾಯತಿಯ ಲೆಕ್ಕಾಧೀಕ್ಷಕರು, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಜಗಳೂರು, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅಣಬೂರು ಗ್ರಾಮ ಪಂಚಾಯಿತಿ ಹಾಗೂ ಆಪಾದಿತ ಅಧ್ಯಕ್ಷರು ಹಾಜರಿದ್ದು, ತಮ್ಮ ಹೇಳಿಕೆಗಳನ್ನು ನೀಡಿರುತ್ತಾರೆ. ಶ್ರೀಮತಿ ಗಿರಿಜಾಬಾಯಿ, ಅಧ್ಯಕ್ಷರು, ಅಣಬೂರು ಗ್ರಾಮ ಪಂಚಾಯತಿರವರು ಯಾವುದೇ ಹೆಚ್ಚಿನ ಹೇಳಿಕೆ ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಸರ್ಕಾರವು ಈ ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ, ಅಣಬೂರು ಗ್ರಾಮ ಪಂಚಾಯಿತಿಯಲ್ಲಿ 2016-17ನೇ ಸಾಲಿನ 14ನೇ ಹಣಕಾಸು ಯೋಜನೆಯಲ್ಲಿ ಬಿಡುಗಡೆಯಾದ ಅನುದಾನವನ್ನು ಕಾಮಗಾರಿಗಳಿಗೆ ಖರ್ಚು ಮಾಡುವಾಗ ಗಾಂಧಿ ಸಾಕ್ಷಿ ತತ್ರಾಂಶದಲ್ಲಿ ಅಳವಡಿಸದೇ ಸಾಮಗ್ರಿ ಖರೀದಿ ಬಿಲ್ಲುಗಳಿಗೆ ಹಣ ಪಾವತಿಸಿ, ಸರ್ಕಾರದ ಮಾರ್ಗಸೂಚಿ ಉಲ್ಲಂಘಿಸಿ ರೂ.37,92,435/-ಗಳನ್ನು ಖರ್ಚು ಭರಿಸಿ ಕರ್ತವ್ಯಲೋಪವೆಸಗಲಾಗಿರುತ್ತದೆ. 2016-17ನೇ ಸಾಲಿನ 14ನೇ ಹಣಕಾಸು ಯೋಜನೆಯಲ್ಲಿ 14 ಕಾಮಗಾರಿಗಳಿಗೆ ಕ್ರಿಯಾ ಯೋಜನೆಯನ್ನು ರೂ.10,97,474/-ಗಳಿಗೆ ಅನುಮೋದನೆಯನ್ನು ಪಡೆದಿದ್ದು, ಸದರಿ ಕಾಮಗಾರಿಗಳನ್ನು ನಿರ್ವಹಿಸದೇ 14ನೇ ಹಣಕಾಸು ಯೋಜನೆಯ ಮಾರ್ಗಸೂಚಿಯನ್ನು ಉಲ್ಲಂಘಿಸಿ, ಕುಡಿಯುವ ನೀರಿನ ಸಾಮಾಗ್ರಿಗಳ ಖರೀದಿ, ಪೈಪ್‌ಲೈನ್ ದುರಸ್ತಿ, ಬೀದಿ ದೀಪಗಳ ನಿರ್ವಹಣೆ, ಮೋಟರ್‌ಗಳ ದುರಸ್ತಿ ಮತ್ತು ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದಂತೆ ಹಳ್ಳಿಗಳ ಚರಂಡಿ ಸ್ವಚ್ಚತೆಗೆ ವೆಚ್ಚ ಭರಿಸಿ ಯೋಜನೆಯ ಮಾರ್ಗಸೂಚಿ ಉಲ್ಲಂಘಿಸಿ ಸರ್ಕಾರದ ಹಣ ದುರುಪಯೋಗಕ್ಕೆ ಕಾರಣರಾಗಿರುವ ಆಪಾದನೆ ಸಾಬೀತಾಗಿರುತ್ತದೆ.

ಅದರಂತೆ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/811/ಗ್ರಾಪಂಅ/2018, ಬೆಂಗಳೂರು, ದಿನಾಂಕ:06-03-2019.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಗಿರಿಜಾಬಾಯಿ, ಅಧ್ಯಕ್ಷರು, ಅಣಬೂರು ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ರವರ ಪ್ರಕರಣದಲ್ಲಿ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ಮತ್ತು 48(4) ರನ್ವಯ ಅಣಬೂರು ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನ ಮತ್ತು ಸದಸ್ಯ ಸ್ಥಾನದಿಂದ ವಜಾಗೊಳಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್) 6/3/19
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ, ದಾವಣಗೆರೆ ಜಿಲ್ಲೆ.

2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಜಗಳೂರು, ದಾವಣಗೆರೆ ಜಿಲ್ಲೆ.
3. ಶ್ರೀಮತಿ ಗಿರಿಜಾಬಾಯಿ, ಅಧ್ಯಕ್ಷರು, ಅಣಬೂರು ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಣಬೂರು ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
6. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಮಾನ್ಯ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. .